ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್. ವೃತ್ತ, ಬೆಂಗಳೂರು-1**

**ದಿನಾಂಕ:08-06-2017.**

**ಸಂಖ್ಯೆ:ಸಿ1[4]371[ಜೆ]-74/2014-15**

**-:ಜ್ಞಾಪನ:-**

**ವಿಷಯ:** 371[ಜೆ]ರಡಿ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ/ತತ್ಸಮಾನ ಗ್ರೂಪ್-ಬಿ ವೃಂದದ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿಮಾಡುವ ಬಗ್ಗೆ.

**ಉಲ್ಲೇಖ:** 1].ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿ.ಪಿ.ಎ.ಆರ್ 06 ಪಿ.ಎಲ್.ಎಕ್ಸ್ 2012 ದಿನಾಂಕ:06-11-2013.

2].ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿ.ಪಿ.ಎ.ಆರ್.ಹೆಚ್.ಕೆ.ಸಿ 2013 ದಿನಾಂಕ:29-01-2014.

3].ಈ ಕಛೇರಿಯ ತಿದ್ದುಪಡಿ ಜ್ಞಾಪನ ಸಂಖ್ಯೆ:ಸಿ1[4].371[ಜೆ]-74/2014-15 ದಿನಾಂಕ:26-03-2016.

4].ಈ ಕಛೇರಿಯ ಜ್ಞಾಪನ ಸಂಖ್ಯೆ:ಸಿ1[2]ಸ್ಥಾನಪನ್ನ ಬಡ್ತಿ/29/2014-15 ದಿನಾಂಕ:23-05-2017.

5].ಸರ್ಕಾರದ ಪತ್ರ ಸಂಖ್ಯೆ:ಇ.ಡಿ 129 ಎಸ್.ಓ.ಹೆಚ್.2016 ದಿನಾಂಕ:15-02-2017.

6].ಈ ಕಛೇರಿಯ ಜ್ಞಾಪನ ಸಂಖ್ಯೆ:ಮು.ಶಿ.ಹು.ಸ್ಥ/01/2016-17 ದಿನಾಂಕ:05-06-2017.

7].ಆಯುಕ್ತರ ಕಛೇರಿಯಲ್ಲಿ ನಡೆದ ಸ್ಥಳ ಆಯ್ಕೆ ಪ್ರಕ್ರಿಯೆ ದಿನಾಂಕ:07-06-2017.

*-&&&&-*

## ಪ್ರಸ್ತಾವನೆ:-

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಉಲ್ಲೇಖ[1] ಮತ್ತು [2]ರ ಸರ್ಕಾರದ ಅಧಿಸೂಚನೆಯಲ್ಲಿ ಸೂಚಿಸಿರುವಂತೆ ಅನುಚ್ಛೇದ 371[ಜೆ]ರಡಿ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ/ತತ್ಸಮಾನ ಗ್ರೂಪ್-ಬಿ ವೃಂದದಲ್ಲಿ ರಾಜ್ಯ ಮಟ್ಟದ ಸ್ಥಳೀಯ ವೃಂದಕ್ಕೆ ಮೀಸಲಿರಿಸಿರುವ ಹುದ್ದೆಗಳನ್ನು ಭರ್ತಿ ಮಾಡಬೇಕಾಗಿರುತ್ತದೆ.

ಉಲ್ಲೇಖ[5]ರ ಸರ್ಕಾರದ ಆದೇಶದಲ್ಲಿ ಚಾಲ್ತಿಯಲ್ಲಿರುವ ನಿಯಮಗಳನುಸಾರ ಸ್ಥಳೀಯ ಹಾಗೂ ಸ್ಥಳೀಯೇತರ ನೌಕರರನ್ನು ಅವರವರ ವೃಂದದಲ್ಲಿ ಭರ್ತಿಮಾಡಿ ಸ್ಥಳನಿಯುಕ್ತಿಗೊಳಿಸುವಂತೆ ಅನುಮೋದನೆ ನೀಡಲಾಗಿದೆ.

ಉಲ್ಲೇಖ[3]ರಂತೆ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ಗ್ರೂಪ್-ಬಿ ವೃಂದದ 15 ಹುದ್ದೆಗಳನ್ನು 371[ಜೆ]ಗೆ ಮೀಸಲಿರಿಸಿ, ಅದರಲ್ಲಿ 04 ಹುದ್ದೆಗಳನ್ನು ನೇರ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ನೇರ ನೇಮಕಾತಿ ಮೂಲಕ ಹಾಲಿ ಮುಖ್ಯ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ 06 ನೌಕರರು 371ಜೆ ಪ್ರಕಾರ "ರಾಜ್ಯ ಮಟ್ಟದ ಸ್ಥಳೀಯ ವೃಂದ"ಕ್ಕೆ ಸೇರ್ಪಡೆಗೊಳ್ಳಲು ಪ್ರಾಧಿಕಾರಕ್ಕೆ ತಮ್ಮ ಅಭಿಮತವನ್ನು ಸಲ್ಲಿಸಿದ್ದು, ಪ್ರಸ್ತುತ ರಾಜ್ಯ ಮಟ್ಟಸ ಸ್ಥಳೀಯ ವೃಂದಕ್ಕೆ ಮೀಸಲಿರಿಸಿದ 04 ಹುದ್ದೆಗಳನ್ನು ನಿಯುಕ್ತಿಗೊಳಿಸುವ ಸಲುವಾಗಿ ಉಲ್ಲೇಖ[6]ರ ಜ್ಞಾಪನದಲ್ಲಿ ಪ್ರಕಟಿಸಿದ 06 ಅಧಿಕಾರಿಗಳನ್ನು ದಿನಾಂಕ:07-06-2017 ರಂದು ಕೌನ್ಸಿಲಿಂಗ್‌ನಲ್ಲಿ ಬಾಗವಹಿಸಿ ಖಾಲಿ ಇದ್ದ ಮುಖ್ಯ ಶಿಕ್ಷಕರು/ತತ್ಸಮಾನ ಗ್ರೂಪ್-ಬಿ ವೃಂದದ ಹುದ್ದೆಗಳನ್ನು ಆಯ್ಕೆಮಾಡಿಕೊಳ್ಳಲು ತಿಳಿಸಲಾಗಿತ್ತು.

ಉಲ್ಲೇಖ[6]ರ ಜ್ಞಾಪನದಲ್ಲಿ ಪ್ರಕಟಿಸಿದ ಅಧಿಕಾರಿಗಳು ದಿನಾಂಕ:07-06-2017ರಂದು ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಬಾಗವಹಿಸಿ ಸ್ವ-ಇಚ್ಛೆಯಿಂದ ಸ್ಥಳ ಆಯ್ಕೆ ಮಾಡಿಕೊಂಡಿದ್ದು, ಅದರಂತೆ ಸ್ಥಳ ನಿಯುಕ್ತಿ ಆದೇಶವನ್ನು ಈ ಮುಂದಿನಂತೆ ಹೊರಡಿಸಿದೆ.

**ಆದೇಶ:**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೆಳಕಂಡ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳನ್ನು ಷರತ್ತಿಗೊಳಪಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆ ಮತ್ತು ಸ್ಥಳಗಳಿಗೆ ವರ್ಗಾಯಿಸಿ ಆದೇಶಿಸಿದೆ.

| ಕ್ರಸಂ | ಹೆಸರು, ಹುದ್ದೆ, ಕಛೇರಿ ವಿಳಾಸ. ಶ್ರೀ/ಶ್ರೀಮತಿ | ಆಯ್ಕೆ ಮಾಡಿಕೊಂಡ ಹುದ್ದೆ, ಶಾಲೆಯ ಹೆಸರು ಮತ್ತು ವಿಳಾಸ |
|---|---|---|
| 1]. | ಶ್ರೀಮತಿ ಬಿ.ನಿರ್ಮಲ, ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಕಾಡುಸೊಣ್ಣಪ್ಪನಹಳ್ಳಿ, ಕಣ್ಣೂರು ಅಂಚೆ, ಬೆಂಗಳೂರು ದಕ್ಷಿಣ ಜಿಲ್ಲೆ. | ಮುಖ್ಯ ಶಿಕ್ಷಕರು, ಸರ್ಕಾರಿ ಉರ್ದು ಪ್ರೌಢಶಾಲೆ, ದೇವರಜೀವನಹಳ್ಳಿ, ಬೆಂಗಳೂರು ಉತ್ತರ ವಲಯ-3, ಬೆಂಗಳೂರು ಉತ್ತರ ಜಿಲ್ಲೆ. |
| 2]. | ಶ್ರೀ ಎ.ಕೆ.ಹುಲುಗಪ್ಪ, ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಬೆಟ್ಟಹಲಸೂರು, ಉತ್ತರ ವಲಯ-04, ಬೆಂಗಳೂರು ಉತ್ತರ ಜಿಲ್ಲೆ. | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಮಾರೇನಹಳ್ಳಿ, ಬೆಂಗಳೂರು ದಕ್ಷಿಣ ವಲಯ-02, ಬೆಂಗಳೂರು ದಕ್ಷಿಣ ಜಿಲ್ಲೆ. |
| 3]. | ಶ್ರೀ ನಾಗರಾಜ್, ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ತೊರೆದೊಡ್ಡಿ, ರಾಮನಗರ ತಾಲ್ಲೂಕು ಮತ್ತು ಜಿಲ್ಲೆ. | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಗೋವಿಂದರಾಜನಗರ, ಬೆಂಗಳೂರು ದಕ್ಷಿಣ ವಲಯ-02, ಬೆಂಗಳೂರು ದಕ್ಷಿಣ ಜಿಲ್ಲೆ. ಬೆಂಗಳೂರು. |

ಷರತ್ತುಗಳು:-

1. ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಸ್ವ-ಇಚ್ಛೆಯಿಂದ ಸ್ಥಳ ಆಯ್ಕೆ ಮಾಡಿಕೊಂಡಿರುವುದರಿಂದ ಈ ಅಧಿಕಾರಿಗಳು ಯಾವುದೇ ರೀತಿಯ ವರ್ಗಾವಣೆ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ ಮತ್ತು ಸ್ಥಳ ಮಾರ್ಪಾಡಿಗೆ ಯಾವುದೇ ಒತ್ತಡ ತರುವುದಕ್ಕೆ ಅವಕಾಶವಿರುವುದಿಲ್ಲ. ಒಂದುವೇಳೆ ಒತ್ತಡ ತಂದಲ್ಲಿ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳಲಾಗುವುದು.
2. ಸ್ಥಳ ಆಯ್ಕೆ ಮಾಡಿಕೊಂಡಿರುವ ಮೇಲ್ಕಂಡ ಅಧಿಕಾರಿಗಳು 15 ದಿನಗಳ ಒಳಗಾಗಿ ಕರ್ತವ್ಯಕ್ಕೆ ಹಾಜರಾಗತಕ್ಕದ್ದು.
3. ಕರ್ತವ್ಯದಿಂದ ಬಿಡುಗಡೆ ಹೊಂದಿದ ಹಾಗೂ ಕರ್ತವ್ಯಕ್ಕೆ ಹಾಜರಾದ ಬಗ್ಗೆ ಈ ಕಛೇರಿಗೆ ಮತ್ತು ಸಂಬಂಧಿಸಿದ ಎಲ್ಲಾ ಮೇಲಾಧಿಕಾರಿಗಳಿಗೆ ವರದಿ ಮಾಡುವುದು.

[ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.]

[ಎಸ್.ಕಾತ್ಯಾಯಿನಿದೇವಿ]
ಜಂಟಿ ನಿರ್ದೇಶಕರು[ಆಡಳಿತ],

8/6/12

**ಇವರಿಗೆ:**

1]. ಸರ್ಕಾರದ ಅವರ ಮುಖ್ಯಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2]. ಉಪನಿರ್ದೇಶಕರು[ಆಡಳಿತ], ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಾಸಿಪಾಳ್ಯಂ, ಬೆಂಗಳೂರು ದಕ್ಷಿಣ ಜಿಲ್ಲೆ. ಬೆಂಗಳೂರು.
3]. ಉಪನಿರ್ದೇಶಕರು[ಆಡಳಿತ], ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ. ಬೆಂಗಳೂರು.
4]. ಉಪನಿರ್ದೇಶಕರು[ಆಡಳಿತ], ಸಾರ್ವಜನಿಕ ಶಿಕ್ಷಣ ಇಲಾಖೆ, ರಾಮನಗರ ಜಿಲ್ಲೆ. ರಾಮನಗರ.
5]. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ವಲಯ-3 ಬೆಂಗಳೂರು ಉತ್ತರ ಜಿಲ್ಲೆ.
6]. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ವಲಯ-2 ಬೆಂಗಳೂರು ದಕ್ಷಿಣ ಜಿಲ್ಲೆ.
7]. ಸಂಬಂಧಿಸಿದ ಅಧಿಕಾರಿಗಳಿಗೆ.
8]. ಕಛೇರಿ ಪ್ರತಿ.